# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST | ಇದು ಸುದ್ದಿ ವಿಳಾಸ | ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.01 | Issue. 323 | Pages. 2 | Date: 20-11-2025, THURSDAY | RNI NO: KARKAN/2024/89601 | Kannada Daily

ಸಂಪುಟ : 01 - ಸಂಚಿಕೆ : 323 - ಪುಟಗಳು : 2 | 20-11-2025 | ಗುರುವಾರ | Ph: 8762954248 | ದರ : ₹1


# ತ್ರಿವಿಧ ದಾಸೋಹಕ್ಕೆ ಸಂಕ್ಲಾಪುರ ಮಠ ಹೆಸರುವಾಸಿ

## ಸಿದ್ದಗಂಗಾ ಶ್ರೀಗಳ ಅಭಿಮತ | ಶ್ರೀ ಶಾಂತವೀರ ಮಲ್ಲಿಕಾರ್ಜುನ ಸ್ವಾಮೀಜಿ ಪಟ್ಟಾಧಿಕಾರ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಆಲೂರು: ಕರ್ನಾಟಕದಲ್ಲಿ ಮಠ ಮಾನ್ಯಗಳ ಕೊಡುಗೆ ಅಪೂರ್ವವಾದುದು. ಸಂಕ್ಲಾಪುರ ಮಠವು ಶಿಕ್ಷಣ, ಸಂಸ್ಕೃತಿ, ಸಂಸ್ಕಾರ, ದಾಸೋಹ ಕ್ಷೇತ್ರದಲ್ಲಿ ತನ್ನದೇಯಾದ ಕೊಡುಗೆ ನೀಡುತ್ತಿದೆ ಎಂದು ತುಮಕೂರು ಸಿದ್ದಗಂಗಾ ಮಠದ ಶ್ರೀ ಸಿದ್ದಲಿಂಗ ಸ್ವಾಮೀಜಿ ಹೇಳಿದರು.

ತಾಲೂಕಿನ ಸಂಕ್ಲಾಪುರದ ಶ್ರೀ ಶಾಂತಮಲ್ಲೇಶ್ವರ ಸ್ವಾಮಿ ಮಠದಲ್ಲಿ ಬುಧವಾರ ಹಮ್ಮಿಕೊಂಡಿದ್ದ ಶ್ರೀ ಶಾಂತವೀರ ಮಲ್ಲಿಕಾರ್ಜುನ ಸ್ವಾಮೀಜಿ ಪಟ್ಟಾಧಿಕಾರ ಮಹೋತ್ಸವದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸಂಕ್ಲಾಪುರ ಮಠಕ್ಕೆ ಉತ್ತರಾಧಿಕಾರಿ ನೇಮಕ ಮಾಡಿದ್ದು ಶ್ರೀ ಮಠದ ಭಕ್ತರು ಅವರಿಗೆ ಎಲ್ಲಾ ರೀತಿಯ ಸಹಕಾರ ನೀಡಬೇಕು. ಶಿಕ್ಷಣದ ಮೂಲಕ ಜ್ಞಾನ, ಸಂಸ್ಕಾರ ಪಡೆಯಬೇಕು. ಸದ್ಭಕ್ತಿ, ಭ್ರಾತೃತ್ವ ಎಲ್ಲರಲ್ಲೂ ಬೆಳೆಯಬೇಕು. ಸಂಕ್ಲಾಪುರ ಮಠ 700 ವರ್ಷಗಳ ಇತಿಹಾಸ ಹೊಂದಿದೆ. ಶ್ರೀ ಶಿವಕುಮಾರ ಸ್ವಾಮೀಜಿ ಅವರಿಗೆ ಧರ್ಮರಾಜೇಂದ್ರ ಸ್ವಾಮೀಜಿ ಅಚ್ಚುಮೆಚ್ಚಿನ ಶಿಷ್ಯರಾಗಿದ್ದರು. ಅದೇ ರೀತಿ ಶ್ರೀ ಶಾಂತವೀರ ಮಲ್ಲಿಕಾರ್ಜುನ ಸ್ವಾಮೀಜಿ ಈ ಭಾಗದಲ್ಲಿ ಉತ್ತಮ ಕೆಲಸಗಳ ಮೂಲಕ ಚಿರಪರಿಚಿತರಾಗಿದ್ದು ಸತ್ಕಾರ್ಯಗಳ ಮೂಲಕ ಮಠದ ಕೀರ್ತಿ ಹೆಚ್ಚಿಸಬೇಕು ಎಂದರು.




ಸುತ್ತೂರು ಶ್ರೀ ವೀರಸಿಂಹಾಸನ ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಮಾತನಾಡಿ, ತ್ರಿವಿಧ ದಾಸೋಹದ ಮೂಲಕ ನಾಡಿನ ಮಠ ಮಾನ್ಯಗಳು ಸದೃಢ ಸಮಾಜ ನಿರ್ಮಾಣಕ್ಕೆ ಅತ್ಯಮೂಲ್ಯ ಕೊಡುಗೆ ನೀಡಿದ್ದು ಪ್ರತಿಯೊಬ್ಬರು ಧಾರ್ಮಿಕ ಕೇಂದ್ರಗಳ ಬಲವರ್ಧನೆಗೆ ಕೈಜೋಡಿಸಬೇಕೆಂದು ಹೇಳಿದರು.

ಮಠ ಮಾನ್ಯಗಳು ಮಕ್ಕಳಿಗೆ ವಿದ್ಯಾದಾನ, ಸಂಸ್ಕಾರ, ಮಾನವೀಯ ಮೌಲ್ಯಗಳನ್ನು ಕಲಿಸಿಕೊಡುತ್ತವೆ. ಭಕ್ತರು ಹಾಗೂ ಮಠಗಳ ಬಾಂಧವ್ಯ ಅತ್ಯಮೂಲ್ಯವಾದುದು. ಜನಸಾಮಾನ್ಯರಿಗೆ ಸಂಸ್ಕಾರ ಕಲಿಸುವ ಕೆಲಸವನ್ನು ಧರ್ಮ ಗುರುಗಳು ಹಾಗೂ ಮಠಗಳು ಮಾಡುತ್ತವೆ ಎಂದರು. ಸಮಾಜದಲ್ಲಿ ಯಾವಾಗಲೂ ಶಾಂತಿ, ಸಹಬಾಳ್ವೆ, ಪರಸ್ಪರ ಸಹಕಾರ ಮನೋಭಾವ ಮೂಡಬೇಕೆನ್ನುವುದು ಶ್ರದ್ಧಾ ಕೇಂದ್ರಗಳ ಆಶಯವಾಗಿರುತ್ತದೆ. ಆ ಮೂಲಕ ಉತ್ತಮ ಸಮಾಜ ಕಟ್ಟಬೇಕು. ಭಕ್ತಾದಿಗಳಿಂದ ಮಠ ಮಾನ್ಯಗಳು ಬೆಳೆಯುತ್ತವೆ. ತ್ರಿವಿಧ ದಾಸೋಹವನ್ನು ಬಲಪಡಿಸಬೇಕು. ಮಠದ ಶ್ರೇಯೋಭಿವೃದ್ಧಿಗೆ ಎಲ್ಲರೂ ಸಹಕಾರ ನೀಡಬೇಕು ಎಂದು ಸಲಹೆ ನೀಡಿದರು.

### ಪ್ರತಿವರ್ಷ ಶ್ರೀ ಮಠಕ್ಕೆ 1 ಲಕ್ಷ ರೂ. ದೇಣಿಗೆ

ಮಾಜಿ ಸಚಿವ ಕೆ.ಗೋಪಾಲಯ್ಯ ಮಾತನಾಡಿ, ನೂರಾರು ವಿದ್ಯಾರ್ಥಿಗಳಿಗೆ ವಿದ್ಯಾದಾನ ಮಾಡುತ್ತಿರುವ ಶ್ರೀ ಮಠದ ಶಾಲೆಗೆ ಸಹಾಯ ಮಾಡುತ್ತೇನೆ. ಪ್ರತಿವರ್ಷ ಕಾರ್ತಿಕ ಮಾಸದಲ್ಲಿ 1 ಲಕ್ಷ ರೂ. ದೇಣಿಗೆ ನೀಡುತ್ತೇನೆಂದು ಭರವಸೆ ನೀಡಿದರು. ಶಾಸಕ ಸಿಮೆಂಟ್ ಮಂಜು ಶ್ರೀ ಮಠದ ದ್ವಾರ ಬಾಗಿಲು ಉದ್ಘಾಟನೆ ಮಾಡಿದರು.



ವ್ಯಕ್ತಿ ಸಂಸ್ಕಾರವಂತನಾಗಬೇಕೆಂದರೆ ಮುಖ್ಯವಾಗಿ ಕಲಿಕೆ ಇರಬೇಕು. ಅದು ಮನೆಯಿಂದಲೇ ಆಗಬೇಕು. ನಂತರ ವಿದ್ಯೆ ಕಲಿಸುವ ಗುರಿ ಆ ದಾರಿಯಲ್ಲಿ ಕರೆದೊಯ್ಯುತ್ತಾನೆ. ಧಾರ್ಮಿಕ ಶ್ರದ್ಧಾ ಕೇಂದ್ರಗಳು ಆ ಕೆಲಸವನ್ನೇ ಮಾಡುತ್ತವೆ. ಗ್ರಾಮೀಣ ಭಾಗದಲ್ಲಿ ಇಂದಿಗೂ ಮಾನವೀಯ ಮೌಲ್ಯ, ಕರುಣೆ, ಸಹಕಾರ ಮನೋಭಾವ ಇದೆಯೆಂದರೆ ಅದಕ್ಕೆ ಭಾರತೀಯ ಧಾರ್ಮಿಕ ಪರಂಪರೆಯೇ ಕಾರಣವೆಂದು ಪ್ರತಿಪಾದಿಸಿದರು.

ಕಾರ್ಯಕ್ರಮ ಉದ್ಘಾಟಿಸಿದ ಸಂಸದ ಶ್ರೇಯಸ್ ಪಟೇಲ್ ಮಾತನಾಡಿ, ಶ್ರೀ ಮಠದ ಬಗ್ಗೆ ನನಗೆ ಅತೀವ ಗೌರವವಿದೆ. ಸುತ್ತೂರು ಹಾಗೂ ಸಿದ್ದಗಂಗಾ ಸ್ವಾಮೀಜಿ ಅವರೊಂದಿಗೆ ವೇದಿಕೆ ಹಂಚಿಕೊಂಡಿದ್ದು ನನ್ನ ಪೂರ್ವ ಜನ್ಮದ ಪುಣ್ಯ ಎಂದು ಭಾವಿಸುತ್ತೇನೆ. ಮಠದ ಅಭಿವೃದ್ಧಿಗೆ ಕೈಲಾದ ನೆರವು ನೀಡುತ್ತೇನೆ ಎಂದರು.

ಕನಕಪುರ ದೇಗುಲ ಮಠದ ಡಾ. ಶ್ರೀ ಚನ್ನಬಸವ ಸ್ವಾಮೀಜಿ, ತಣ್ಣೀರುಹಳ್ಳ ಮಠದ ಶ್ರೀ ವಿಜಯಕುಮಾರ ಸ್ವಾಮೀಜಿ, ಸಂಕಲಾಪುರ-ಕಲ್ಲುಮಠದ ಶ್ರೀ ಧರ್ಮರಾಜೇಂದ್ರ ಸ್ವಾಮೀಜಿ, ಶ್ರೀ ಶಾಂತವೀರ ಮಲ್ಲಿಕಾರ್ಜುನ ಶ್ರೀ, ಶಾಸಕ ಹೆಚ್.ಕೆ.ಸುರೇಶ್, ಬಿಜೆಪಿ ಜಿಲ್ಲಾಧ್ಯಕ್ಷ ಸಿದ್ದೇಶ್ ನಾಗೇಂದ್ರ, ನಿವೃತ್ತ ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಹಣಾಧಿಕಾರಿ ಎಂ.ಡಿ.ಕಾಂತರಾಜು ಮತ್ತಿತರರಿದ್ದರು.

# ದೇಶಕ್ಕೆ ಇಂದಿರಾ ಗಾಂಧಿ ಕೊಡುಗೆ ಅನನ್ಯ : ಸಂಸದ ಶ್ರೇಯಸ್



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಸ್ವಾತಂತ್ರ್ಯೋತ್ತರ ಭಾರತದ ದಿಕ್ಕು, ಧೈರ್ಯ ಮತ್ತು ದೃಷ್ಟಿಯನ್ನು ರೂಪಿಸಿದ ಇಂದಿರಾ ಗಾಂಧಿ ಅವರ ನಾಯಕತ್ವ ಇಂದಿಗೂ ನಮ್ಮ ರಾಜಕೀಯ-ಸಾಮಾಜಿಕ ಜೀವನಕ್ಕೆ ದಾರಿ ದೀಪವಾಗಿದೆ. ಅವರು ದೇಶಕ್ಕೆ ನೀಡಿದ ಕೊಡುಗೆ ಅಪಾರ ಎಂದು ಸಂಸದ ಶ್ರೇಯಸ್ ಪಟೇಲ್ ಹೇಳಿದರು.

ನಗರದ ಬಿಎಂ ರಸ್ತೆಯಲ್ಲಿರುವ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಬುಧವಾರ ಹಮ್ಮಿಕೊಂಡಿದ್ದ ಭಾರತದ ಮೊದಲ ಮಹಿಳಾ ಪ್ರಧಾನಿ ಇಂದಿರಾ ಗಾಂಧಿ ಅವರ ಜನ್ಮದಿನ ಆಚರಣೆಯಲ್ಲಿ ಮಾತನಾಡಿ, ಭಾರತೀಯ ಇತಿಹಾಸದಲ್ಲಿ ಇಂದಿರಾ ಗಾಂಧಿ ಅವರ ಹೆಸರು ಅಜರಾಮರವಾಗಿದೆ. ದೇಶದ ಏಕತೆ, ಪ್ರಗತಿ ಮತ್ತು ಬಡವರ ಕಲ್ಯಾಣವೆಂಬ ಅವರ ಸಂಕಲ್ಪ ಹೊಸ ಪೀಳಿಗೆಗೂ ಪ್ರೇರಣೆ. ಇಂದಿರಾ ಗಾಂಧಿ ಅವರ ತತ್ವಾದರ್ಶಗಳು ಭಾರತದ ರಾಜಕೀಯ ಚರಿತ್ರೆಯಲ್ಲಿ ಸದಾ ಉಳಿಯುತ್ತವೆ. ಭಾರತೀಯ ರಾಜಕಾರಣದಲ್ಲಿ ಅವರು ಕಟ್ಟಿದ ಮೌಲ್ಯಗಳು ಹೊಸ ಭಾರತ ನಿರ್ಮಾಣದತ್ತ ಕೊಂಡೊಯ್ಯುತ್ತಿವೆ ಎಂದರು.

ಕಾಂಗ್ರೆಸ್ ಮಹಿಳಾ ಘಟಕದ ಜಿಲ್ಲಾ ಅಧ್ಯಕ್ಷೆ ತಾರಾಚಂದ, ಮುಖಂಡರಾದ ರಘು ದಾಸರಕೊಪ್ಪಲು, ಮಂಜುನಾಥ ಶರ್ಮಾ, ಖಯ್ಯುಂ ಇತರರಿದ್ದರು.

# ಸ್ಕಾಲರ್ಸ್ ಶಾಲೆಯಲ್ಲಿ ಆರೋಗ್ಯ ಜಾಗೃತಿ ಶಿಬಿರ




ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ನಗರದ ಸ್ಕಾಲರ್ಸ್ ಶಾಲೆಯಲ್ಲಿ ಉಜಿರೆಯ ಎಸ್‌ಡಿಎಂ ನ್ಯಾಚುರೋಪತಿ ಮತ್ತು ಯೋಗ ವಿಜ್ಞಾನ ಕಾಲೇಜಿನ ವೈದ್ಯರಾದ ಡಾ. ಭಾವನಾ ಮತ್ತು ಲಹರಿ ಅನಂತು ಅವರ ನೇತೃತ್ವದಲ್ಲಿ ಆರೋಗ್ಯ ಜಾಗೃತಿ ಶಿಬಿರ ಆಯೋಜಿಸಲಾಗಿತ್ತು.

ಡಾ. ಭಾವನಾ ಮಾತನಾಡಿ, ಶಿಬಿರದಲ್ಲಿ ನ್ಯಾಚುರೋಪತಿ, ಯೋಗ, ಪ್ರಾಣಾಯಾಮ, ಆಕ್ಯೂಪಂಕ್ಚರ್ ಮತ್ತು ಹೆಣ್ಣು ಮಕ್ಕಳ ಋತುಚಕ್ರದ ಬಗ್ಗೆ ಮಾಹಿತಿ ಹಾಗು ಸಲಹೆ ನೀಡಿದರು. ವಿದ್ಯಾರ್ಥಿಗಳು ಹಾಗು ಪೋಷಕರು ಆರೋಗ್ಯಕರ ಜೀವನ ಶೈಲಿಯ ಅಗತ್ಯವನ್ನು ಅರ್ಥಮಾಡಿಕೊಂಡು ಅಳವಡಿಸಿಕೊಳ್ಳಬೇಕು ಎಂದರು.

ಶಾಲೆಯ ಕಾರ್ಯದರ್ಶಿ ಮಮತಾ ಚಂದ್ರಶೇಖರ್, ಆಡಳಿತಾಧಿಕಾರಿ ಡಾ. ಎಚ್.ಎನ್. ಚಂದ್ರಶೇಖರ್, ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಪಾಲ್ಗೊಂಡಿದ್ದರು.

# ಬೆಂಗಳೂರಿನಲ್ಲಿ ನಾಳೆಯಿಂದ ಜೆಡಿಎಸ್ ರಜತ ಮಹೋತ್ಸವ




ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಪ್ರಾದೇಶಿಕ ಪಕ್ಷವಾಗಿ ತನ್ನದೇಯಾದ ಛಾಪು ಮೂಡಿಸಿರುವ ಜೆಡಿಎಸ್‌ಗೆ 25 ವರ್ಷ ಪೂರ್ಣಗೊಂಡಿದ್ದು ನ. 21 ಹಾಗು 22ರಂದು ಬೆಂಗಳೂರಿನ ಜೆಪಿ ಭವನದಲ್ಲಿ ರಜತ ಮಹೋತ್ಸವ ಏರ್ಪಡಿಸಲಾಗಿದೆ ಎಂದು ಅರಕಲಗೂಡು ಶಾಸಕ ಎ.ಮಂಜು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಬುಧವಾರ ಮಾತನಾಡಿ, ನ. 21ರ ಶುಕ್ರವಾರ ಸಂಜೆ 4.30ಕ್ಕೆ ಸೇವಾದಳ ವತಿಯಿಂದ ಧ್ವಜಾರೋಹಣ, ಸಂಜೆ 5 ಗಂಟೆಗೆ ಹಾಲಿ ಶಾಸಕರು ಹಾಗೂ ಮಾಜಿ ಸಚಿವರು, ವಿಧಾನ ಪರಿಷತ್ ಸದಸ್ಯರು ಪ್ರದರ್ಶಿನಿ ಉದ್ಘಾಟಿಸುವರು. ಸಂಜೆ 6.30 ಗಂಟೆಗೆ ಪಕ್ಷದ ರಾಜ್ಯ ಹಾಗು ರಾಷ್ಟ್ರೀಯ ಪರಿಷತ್ ಪದಾಧಿಕಾರಿಗಳ ಸಭೆ ನಡೆಯಲಿದೆ. ನ. 22ರ ಶನಿವಾರ ಬೆಳಿಗ್ಗೆ 11 ಗಂಟೆಗೆ ಪಕ್ಷದ ರಜತ ಮಹೋತ್ಸವ ಹಾಗೂ ರಾಷ್ಟ್ರೀಯ ಮಹಾ ಅಧಿವೇಶನ ನಡೆಯಲಿದೆ ಎಂದು ಹೇಳಿದರು.

ಡಿ. 1 ರಿಂದ 2026ರ ಜನವರಿ 15ರ ವರೆಗೆ ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರ ಮತ್ತು ವಿಧಾನಸಭಾ ಕ್ಷೇತ್ರಗಳಲ್ಲಿ ಪ್ರದರ್ಶಿನಿ ಮತ್ತು ಕಾರ್ಯಕರ್ತರ ಸಭೆ ನಡೆಯಲಿವೆ. ಜನವರಿ ಕೊನೆಯಲ್ಲಿ ಕಾರ್ಯಕರ್ತರ ಬೃಹತ್ ಸಮಾವೇಶ ನಡೆಯಲಿದೆ. ಹಾಸನದಲ್ಲಿ ಕಾರ್ಯಕರ್ತರ ಬೃಹತ್ ಸಮಾವೇಶದ ಮೂಲಕ ಪಕ್ಷ ಸಂಘಟನೆಗೆ ಚಾಲನೆ ನೀಡಬೇಕೆಂಬ ಯೋಜನೆ ಮೊದಲಿನಿಂದಲೂ ಇದೆ. ಆದರೆ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರ ಅನಾರೋಗ್ಯ ಕಾರಣದಿಂದ ದಿನಾಂಕ ಮುಂದೂಡಲಾಗಿದೆ. ಹಾಸನದಲ್ಲಿ ಶೀಘ್ರವಾಗಿ ಸಮಾವೇಶ ನಡೆಸುತ್ತೇವೆ ಎಂದರು.

ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಅಥವಾ ಸಂಪುಟ ಪುನಾರಚನೆ ಕುರಿತು ನಮಗೆ ಮಾಹಿತಿ ಇಲ್ಲ. ಕುರ್ಚಿ ಕಿತ್ತಾಟದಿಂದ ಅಭಿವೃದ್ಧಿ ಕಾಮಗಾರಿಗಳು ಆಗುತ್ತಿಲ್ಲ. ಬೆಂಗಳೂರಿನಲ್ಲಿ ರಸ್ತೆ ಗುಂಡಿ ಮುಚ್ಚಲು ಸರ್ಕಾರದ ಬಳಿ ಅನುದಾನವಿಲ್ಲ. ಪಂಚ ಗ್ಯಾರಂಟಿಗಳಿಗೆ ಹಣ ಹೊಂದಿಸಲಷ್ಟೇ ಸರ್ಕಾರ ಶಕ್ತವಾಗಿದೆ. ಈ ಸರ್ಕಾರ ಇರುವುದಕ್ಕಿಂತ ಪತನವಾಗುವುದೇ ಲೇಸು ಎಂದರು.

2028ರ ಚುನಾವಣೆಯಲ್ಲಿ ಎನ್‌ಡಿಎ ಅಧಿಕಾರಕ್ಕೆ ಬರುವುದು ಹಾಗೂ ಹೆಚ್.ಡಿ.ಕುಮಾರಸ್ವಾಮಿ ಅವರು ಮುಖ್ಯಮಂತ್ರಿಯಾಗುವುದು ಶತ:ಸಿದ್ಧ. ನಾನು ಜೆಡಿಎಸ್ ಶಾಸಕನಾಗಿದ್ದು ಮುಂದಿನ ಚುನಾವಣೆಯಲ್ಲೂ ಸ್ಪರ್ಧಿಸುತ್ತೇನೆಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ಶಾಸಕ ಎಚ್.ಪಿ. ಸ್ವರೂಪ್, ಜೆಡಿಎಸ್ ತಾಲ್ಲೂಕು ಅಧ್ಯಕ್ಷರಾದ ಎಸ್. ದ್ಯಾವೇಗೌಡ, ಕೆ.ಎಸ್. ಮಂಜುನಾಥ್, ಜೆಡಿಎಸ್ ಜಿಲ್ಲಾ ವಕ್ತಾರ ರಘು ಹೊಂಗೆರೆ ಇತರರಿದ್ದರು.

# ಸಮಾಜ ಅಭಿವೃದ್ಧಿಗೆ ಮಠಗಳ ಕೊಡುಗೆ ಹೆಚ್ಚು: ಸಿಮೆಂಟ್ ಮಂಜು



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಆಲೂರು: ರಾಜ್ಯವು ಶೈಕ್ಷಣಿಕ, ಆರ್ಥಿಕ ಹಾಗೂ ಸಾಮಾಜಿಕವಾಗಿ ಅಭಿವೃದ್ಧಿ ಹೊಂದುವಲ್ಲಿ ಮಠಗಳ ಕೊಡುಗೆ ಅಪಾರ ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.


ತಾಲ್ಲೂಕಿನ ಪಾಳ್ಯ ಹೋಬಳಿ ಸಂಕಲಾಪುರ ಮಠದ ಝೂನ್ಸಿ ವಿದ್ಯಾ ಸಂಸ್ಥೆಯ ವಾರ್ಷಿಕೋತ್ಸವದಲ್ಲಿ ಮಾತನಾಡಿ, ಯಾವ ಜಾತಿ ಬೇಧವಿಲ್ಲದೆ ಸರ್ವರಿಗೂ ಶಿಕ್ಷಣ ನೀಡುವ ಮೂಲಕ ಅಕ್ಷರ ದಾಸೋಹದಲ್ಲಿ ತೊಡಗಿರುವ ಮಠಗಳು ಶೈಕ್ಷಣಿಕ ಕ್ಷೇತ್ರಕ್ಕೆ ತಮ್ಮದೇಯಾದ ಕೊಡುಗೆ ನೀಡಿವೆ. ಆರೋಗ್ಯಕರ ಸಮಾಜ ನಿರ್ಮಾಣವಾಗಲು ನಾಡಿನ ಮಠಾಧೀಶರ ಸಲಹೆ, ಸೂಚನೆ, ಮಾರ್ಗದರ್ಶನ ಅಗತ್ಯವಾಗಿದೆ. ಇಲ್ಲಿನ ಶ್ರೀಗಳು ಈ ಭಾಗದಲ್ಲಿ ಧಾರ್ಮಿಕ ಕಾರ್ಯಕ್ರಮಗಳ ಮೂಲಕ ಜನ ಜಾಗೃತಿ ಮೂಡಿಸುವುದರ ಜೊತೆಗೆ ಶಿಕ್ಷಣಕ್ಕೆ ಆದ್ಯತೆ ನೀಡಿ ಇತರರಿಗೆ ಮಾದರಿಯಾಗಿದ್ದಾರೆ. ಅವರ ಕೆಲಸಗಳಿಗೆ ಭಕ್ತರು ಅಗತ್ಯ ಸಹಾಯ ನೀಡುತ್ತಿರುವುದು ಹೊಸ ಬೆಳವಣಿಗೆ ಎಂದರು.

ಜಾತಿ, ಮತ, ಪಂಥದ ಬೇಧವಿಲ್ಲದೆ ಲಕ್ಷಾಂತರ ಬಡ ವಿದ್ಯಾರ್ಥಿಗಳಿಗೆ ಪ್ರಸಾದ ಸಹಿತ ಶಿಕ್ಷಣ ನೀಡುತ್ತಿರುವ ಸಿದ್ದಗಂಗಾ ಮಠ ಬಡ ವಿದ್ಯಾರ್ಥಿಗಳ ಪಾಲಿನ ಬೆಳಕಿನಂತಿದೆ. ವಿದ್ಯಾರ್ಥಿಗಳು ಈಗಿನಿಂದಲೇ ರಾಷ್ಟ್ರ ಪ್ರೇಮ, ರಾಷ್ಟ್ರ ಭಕ್ತಿ, ರಾಷ್ಟ್ರೀಯ ಭಾವೈಕ್ಯತೆಯನ್ನು ಬೆಳೆಸಿಕೊಳ್ಳಬೇಕೆಂದು ಕಿವಿಮಾತು ಹೇಳಿದರು.

ಶಾಲಾ ವಾರ್ಷಿಕೋತ್ಸವದ ಹಿನ್ನಲೆಯಲ್ಲಿ ನಡೆದ ಆಟೋಟ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳು ಹಾಗೂ ಪೋಷಕರಿಗೆ ಬಹುಮಾನ ವಿತರಿಸಲಾಯಿತು.

ಸಂಕಲಾಪುರ ಮಠದ ನೂತನ ಉತ್ತರಾಧಿಕಾರಿಯಾಗಿ ನೇಮಕಗೊಂಡ ಶ್ರೀ ಶಾಂತವೀರ ಮಲ್ಲಿಕಾರ್ಜುನ ಸ್ವಾಮೀಜಿ, ಪ್ರಧಾನ ಭಾಷಣಕಾರ ರುದ್ರೇಶ್, ಜಿಲ್ಲಾ ವೀರಶೈವ ಲಿಂಗಾಯತ ಸಂಘದ ಖಜಾಂಚಿ ಎಂ.ಪಿ.ಕಾಂತರಾಜ್, ತಾಲ್ಲೂಕು ಶಿಕ್ಷಣ ಸಂಯೋಜಕ ದಿವಾಕರ್, ಜಾನ್ಸಿ ವಿದ್ಯಾ ಸಂಸ್ಥೆಯ ಉಪಾಧ್ಯಕ್ಷ ಚಿಕ್ಕೋಟೆ ಮಹೇಶ್, ಕಾರ್ಯದರ್ಶಿ ಕೆ.ಆರ್.ಕಾಂತರಾಜ್, ಸದಸ್ಯರಾದ ಆನಂದ್, ನಿಂಗರಾಜ್ ಮತ್ತಿತರರಿದ್ದರು.

# ಹಿರೀಸಾವೆ ಗ್ರಾ.ಪಂ.ಗೆ ಪರಮೇಶ್ ಅಧ್ಯಕ್ಷ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ತಾಲ್ಲೂಕಿನ ಹಿರೀಸಾವೆ ಗ್ರಾಮ ಪಂಚಾಯಿತಿ ಅಧ್ಯಕ್ಷರಾಗಿ ಕೆ.ಪರಮೇಶ್ ಬುಧವಾರ ಅವಿರೋಧ ಆಯ್ಕೆಯಾದರು.

ಜಯಮ್ಮ ಅವರ ರಾಜೀನಾಮೆಯಿಂದ ತೆರವಾಗಿದ್ದ ಸ್ಥಾನಕ್ಕೆ ಚುನಾವಣೆ ಪ್ರಕ್ರಿಯೆ ನಡೆಯಿತು. ಪರಮೇಶ್ ಒಬ್ಬರೇ ನಾಮಪತ್ರ ಸಲ್ಲಿಸಿದ್ದರು.

ಪಂಚಾಯಿತಿಯಲ್ಲಿ 23 ಸದಸ್ಯರು ಇದ್ದು, 18 ಸದಸ್ಯರು ಹಾಜರಾಗಿದ್ದರು. ನೂತನ ಅಧ್ಯಕ್ಷರನ್ನು ಗ್ರಾಮ ಪಂಚಾಯಿತಿ ಉಪಾಧ್ಯಕ್ಷೆ ವೇದಾವತಿ ಮಂಜುನಾಥ್, ಸದಸ್ಯರು, ಸಿಬ್ಬಂದಿ, ಜೆಡಿಎಸ್ ಮುಖಂಡರು ಮತ್ತು ಹೋಬಳಿಯ ಗಂಗಾ ಮತಸ್ಥ ಸಮುದಾಯದ ಮುಖಂಡರು, ವಿವಿಧ ಸಂಘದ ಪದಾಧಿಕಾರಿಗಳು ಅಭಿನಂದಿಸಿದರು.

# ಅಂತಾರಾಷ್ಟ್ರೀಯವಾಗಿ ಹಬ್ಬಿದ ಸಹಕಾರ ಕ್ಷೇತ್ರದ ಗುರುತು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ಸಹಕಾರ ಕ್ಷೇತ್ರವು ಅಂತಾರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಿಕೊಂಡಿದೆ ಎಂದು ಶಾಸಕ ಸಿ.ಎನ್. ಬಾಲಕೃಷ್ಣ ಹೇಳಿದರು.

ಪಟ್ಟಣದಲ್ಲಿ ಟಿಎಪಿಸಿಎಂಎಸ್, ಹಾಲು ಒಕ್ಕೂಟ ವಿವಿಧ ಸಹಕಾರ ಸಂಘಗಳ ವತಿಯಿಂದ ಬುಧವಾರ ಹಮ್ಮಿಕೊಂಡಿದ್ದ 72ನೇ ಅಖಿಲ ಭಾರತ ಸಹಕಾರ ಸಪ್ತಾಹ ಉದ್ಘಾಟಿಸಿ ಮಾತನಾಡಿ, ಸಹಕಾರ ಕ್ಷೇತ್ರ ಅಭಿವೃದ್ಧಿ ಹೊಂದಿದರೆ ಮಾತ್ರ ದೇಶ ಪ್ರಗತಿ ಕಾಣಲು ಸಾಧ್ಯ ಎಂದರು.



ದೇಶದ ಪ್ರತಿಯೊಬ್ಬ ರೈತನು ಸಹ ಕೃಷಿ ಪತ್ತಿನ ಸಹಕಾರ ಸಂಘ, ಹಾಲು ಉತ್ಪಾದಕರ ಸಹಕಾರ ಸಂಘ ಸೇರಿ ಒಂದಲ್ಲ ಒಂದು ಸಹಕಾರ ಸಂಘಗಳ ಮೂಲಕ ಹತ್ತಾರು ಅನುಕೂಲ ಪಡೆಯುತ್ತಿದ್ದು ಬದುಕನ್ನು ಸದೃಢಗೊಳಿಸಿಕೊಂಡಿರುವುದು ಒಳ್ಳೆಯ ಬೆಳವಣಿಗೆಯಾಗಿದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ 1800 ಹಾಲು ಉತ್ಪಾದಕರ ಸಹಕಾರ ಸಂಘಗಳಿಗಯವೆ. ಅದರಲ್ಲಿ 800ಕ್ಕೂ ಹೆಚ್ಚು ಮಹಿಳಾ ಸಹಕಾರ ಸಂಘಗಳು ಇದ್ದು ಹೈನುಗಾರಿಕೆಯ ಹೇಳಿಕೆಯಲ್ಲಿ ಮಹಿಳೆಯರ ಪಾತ್ರ ಪ್ರಮುಖವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕೆಲವು ವರ್ಷಗಳ ಹಿಂದೆ ಜಿಲ್ಲಾ ಬ್ಯಾಂಕ್ ಸಿಬ್ಬಂದಿಗೆ ಸಂಬಳ ನೀಡಲಾಗದಂತಹ ಸ್ಥಿತಿ ಎದುರಾಗಿತ್ತು. ಅಂತಹ ಸಮಯದಲ್ಲಿ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಅವರು ಪೈಲೆಟ್ ಯೋಜನೆ ಮೂಲಕ 3 ಕೋಟಿ ರೂ. ಅನುದಾನ ಕಲ್ಪಿಸಿ ಸಹಕಾರ ಕ್ಷೇತ್ರದ ಉಳಿವು ಹಾಗೂ ಪ್ರಗತಿಗೆ ಕಾರಣಕರ್ತರಾದರು ಎಂದು ಶ್ಲಾಘಿಸಿದರು.

ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಮುಖ್ಯಮಂತ್ರಿಯಾಗಿದ್ದ ವೇಳೆ 3,800 ಕೋಟಿ ರೂ. ರೈತರ ಸಾಲ ಮನ್ನಾ ಮಾಡಿದ್ದರು. ಅದರಿಂದ ಲಕ್ಷಾಂತರ ರೈತ ಕುಟುಂಬಗಳು ಸಾಲದಿಂದ ಮುಕ್ತಿ ಪಡೆದು ನಿರಾಳಗೊಂಡಿವೆ ಎಂದರು.

ಹೈನುಗಾರಿಕೆಯಲ್ಲಿ ತೊಡಗಿರುವ ರೈತರು ತಮ್ಮ ಜಾನುವಾರುಗಳಿಗೆ 400 ರೂ. ಪಾವತಿಸಿ ವಿಮೆ ಮಾಡಿಸುವುದು ಸೂಕ್ತ. ಜೊತೆಗೆ ಹಾಸನ ಹಾಲು ಒಕ್ಕೂಟ ಹಾಗೂ ಕೆಎಂಎಫ್ ಉಳಿದ ಹಣವನ್ನು ಪಾವತಿಸಲಿದೆ. ವಿಮೆ ಹೊಂದಿರುವ ಜಾನುವಾರು ಅನಿವಾರ್ಯ ಮೃತಪಟ್ಟಲ್ಲಿ 70 ಸಾವಿರ ರೂ. ಪರಿಹಾರ ಸಿಗಲಿದೆ ಎಂದು ಮನವಿ ಮಾಡಿದರು.

ಹಾಲು ಉತ್ಪಾದನೆಯಲ್ಲಿ ಚನ್ನರಾಯಪಟ್ಟಣ ತಾಲೂಕು ರಾಜ್ಯದಲ್ಲಿಯೇ ನಾಲ್ಕನೇ ಸ್ಥಾನದಲ್ಲಿದೆ. 340 ಹಾಲು ಉತ್ಪಾದಕರ ಸಹಕಾರ ಸಂಘಗಳಿದ್ದು ದಿನ ಒಂದಕ್ಕೆ 2.86 ಲಕ್ಷ ಲೀಟರ್ ಹಾಲು ಉತ್ಪಾದನೆಯಾಗಲಿದೆ. ವಾರ್ಷಿಕ 400 ಕೋಟಿ ರೂ. ವಹಿವಾಟು ನಡೆಯುತ್ತಿದೆ ಎಂದು ಮಾಹಿತಿ ನೀಡಿದರು.

ಸಂಪನ್ಮೂಲ ವ್ಯಕ್ತಿ ಜಯಪ್ರಕಾಶ್ ಮಾತನಾಡಿ, ಸಹಕಾರ ಸಂಘಗಳ ಮೂಲಕ ಹಲವು ಸೇವೆಗಳನ್ನು ಪ್ರಾರಂಭಿಸಬಹುದು. ಸಹಕಾರ ಸಂಘಗಳ ಮೂಲಕ 108 ಅಂಬುಲೆನ್ಸ್ ಸೇವೆ ನಡೆಸಬಹುದು. ಸಮಾಜದ ಬೆಳವಣಿಗೆಗೆ ಪೂರಕವಾಗಿ ಅನೇಕ ಸೇವೆಗಳನ್ನು ಸಲ್ಲಿಸುವ ಅವಕಾಶ ಸಹಕಾರ ಕ್ಷೇತ್ರದಲ್ಲಿದೆ ಎಂದರು.

ಸಹಕಾರ ರತ್ನ ಪ್ರಶಸ್ತಿ ಪುರಸ್ಕೃತ ದೇವೇಗೌಡ ಮಾತನಾಡಿದರು. ರಾಜ್ಯ ಮಾರಾಟ ಮಹಾಮಂಡಳ ಅಧ್ಯಕ್ಷ ಸಿ.ಎನ್. ಪುಟ್ಟಸ್ವಾಮಿಗೌಡ, ಟಿಎಪಿಸಿಎಂಎಸ್ ಅಧ್ಯಕ್ಷ ಮೆಡಿಕಲ್ ವೆಂಕಟೇಶ್, ನಿರ್ದೇಶಕರಾದ ತೋಟೀನ್ ನಾಗಣ್ಣ, ಅನಿಲ್, ಹೇಮಾವತಿ ಸಹಕಾರ ಸಕ್ಕರೆ ಕಾರ್ಖಾನೆ ಅಧ್ಯಕ್ಷ ಸಿ.ಎನ್.ವೆಂಕಟೇಶ್, ಮಾಜಿ ಅಧ್ಯಕ್ಷ ತೋಟಿ ಜಯರಾಮ್, ರಾಜ್ಯ ಜೆಡಿಎಸ್ ಉಪಾಧ್ಯಕ್ಷ ಎಚ್.ಜಿ. ರಾಮಕೃಷ್ಣ, ಜೆಡಿಎಸ್ ತಾಲೂಕು ಅಧ್ಯಕ್ಷ ಪರಮದ ದೇವರಾಜೇಗೌಡ, ಸಿಡಿಪಿಓ ವಿಜಯೇಂದ್ರ, ಜಿಲ್ಲಾ ಬ್ಯಾಂಕ್ ನಾಮನಿರ್ದೇಶಿತ ಸದಸ್ಯ ಅಭಿಲಾಷ್, ನಾಗರಾಜ್, ಮಧು, ದಯಾನಂದ್, ಯೋಗೇಶ್ ಇತರರಿದ್ದರು.

# ಬಿಳಿಸುಳಿ ರೋಗ: ಪರಿಹಾರಕ್ಕಾಗಿ ಸರ್ಕಾರಕ್ಕೆ ಡಿಸಿ ಪತ್ರ

## 5,655 ಹೆಕ್ಟೇರ್ ಬೆಳೆ ಹಾನಿ | ಪರಿಹಾರ ಕೋರಿ ಸರ್ಕಾರಕ್ಕೆ ಪತ್ರ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಮುಂಗಾರು ಹಂಗಾಮಿನಲ್ಲಿ ಬಿತ್ತನೆ ಮಾಡಲಾಗಿದ್ದ ಮುಸುಕಿನ ಜೋಳ ಬಿಳಿಸುಳಿ ರೋಗದಿಂದ ಹಾನಿಗೀಡಾಗಿದ್ದು ಸರ್ಕಾರ ಅನ್ನದಾತರ ನೆರವಿಗೆ ಸರ್ಕಾರ ಧಾವಿಸಬೇಕು ಹಾಗೂ ಕಳಪೆ ಬಿತ್ತನೆ ಬೀಜ ವಿತರಿಸಿದ ಕಂಪನಿಗಳು ನೈತಿಕ ಹೊಣೆ ಹೊತ್ತು ಸಹಾಯಕ್ಕೆ ಬರಬೇಕೆಂದು ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಪ್ರತಿಪಾದಿಸಿದ್ದಾರೆ.

ನ. 11ರಂದು ಕೃಷಿ ಆಯುಕ್ತರಿಗೆ ಸುದೀರ್ಘ 4 ಪುಟಗಳ ಪತ್ರ ಬರೆದಿರುವ ಜಿಲ್ಲಾಧಿಕಾರಿ ಜಿಲ್ಲೆಯ ರೈತರು ಎದುರಿಸುತ್ತಿರುವ ತೊಂದರೆ ಮತ್ತು ಸರ್ಕಾರ ಕೈಗೊಳ್ಳಬೇಕಿರುವ ಕ್ರಮಗಳ ಕುರಿತು ಉಲ್ಲೇಖಿಸಿದ್ದಾರೆ. ಎನ್‌ಡಿಆರ್‌ಎಫ್ / ಎಸ್‌ಡಿಆರ್‌ಎಫ್ ಮಾರ್ಗಸೂಚಿ ಅನ್ವಯ ರೋಗ ಅಥವಾ ಕೀಟಬಾಧೆಯಿಂದ ಬೆಳೆ ನಷ್ಟವಾದರೆ ಪರಿಹಾರ ನೀಡಲು ಸಾಧ್ಯವಿಲ್ಲ. ಆದರೆ ರೈತರ ಮನೋಸ್ಥೈರ್ಯ ಕುಗ್ಗಿಸದಂತೆ ಅವರ ಆರ್ಥಿಕತೆಗೆ ತೊಂದರೆಯಾಗದಂತೆ ಕ್ರಮವಹಿಸಬೇಕಿದೆ. ವಿಶೇಷ ಪ್ರಕರಣವೆಂದು ಭಾವಿಸಿ ಪರಿಹಾರ ದೊರಕಿಸಿಕೊಡಬೇಕು. ಬಿತ್ತನೆ ಬೀಜ ವಿತರಿಸಿದ ಕಂಪನಿಗಳನ್ನೇ ಹೊಣೆಗಾರರನ್ನಾಗಿಸಬೇಕೆಂದು ಅವರು ಸ್ಪಷ್ಟವಾಗಿ ತಿಳಿಸಿದ್ದಾರೆ.



### 1,01,065 ಹೆಕ್ಟೇರ್‌ನಲ್ಲಿ ಬಿತ್ತನೆ

2025ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಜಿಲ್ಲೆಯಲ್ಲಿ ಬಿತ್ತನೆಯಾಗಿರುವ 2,29,974 ಹೆಕ್ಟೇರ್ ಕೃಷಿ ಬೆಳೆಗಳ ಪೈಕಿ 1,01,065 ಹೆಕ್ಟೇರ್‌ನಲ್ಲಿ (ಶೇ. 40ರಷ್ಟು) ಮುಸುಕಿನ ಜೋಳ ಬೆಳೆ ಕೈಗೊಳ್ಳಲಾಗಿದೆ. ಜಿಲ್ಲೆಯ ಬಹುತೇಕ ರೈತರು ಹೈನುಗಾರಿಕೆಯನ್ನೇ ಅವಲಂಬಿಸಿದ್ದು ಮೇವು ಹಾಗು ಕಾಳಿನ ಉದ್ದೇಶಕ್ಕೆ ಮುಸುಕಿನ ಜೋಳ ಬೆಳೆಯಲು ಪೂರಕ ವಾತಾವರಣ ಇದೆ. ಆದ್ದರಿಂದ ರೈತರು ಅದೇ ಸಂಪ್ರದಾಯ ಮುಂದುವರಿಸಿಕೊಂಡು ಬಂದಿದ್ದಾರೆ. ಈ ಬಾರಿ ಪೆರೆನೊಸ್ಕಕ್ಲಿರೊಸ್ಪರ್ ಸೋರ್ಗಿ ಎನ್ನುವ ಶಿಲೀಂದ್ರ ಗಾಳಿ ಮತ್ತು ಮಣ್ಣಿನ ಮೂಲಕ ವೇಗವಾಗಿ ಹರಡಿದೆ. ಬೆಳೆಯ ಬೆಳವಣಿಗೆ ಹಂತದಲ್ಲಿ ಮಳೆ ಹೆಚ್ಚಾದ ಕಾರಣ ಮತ್ತು ವಾತಾವರಣದಲ್ಲಿ ಹೆಚ್ಚಿನ ಆರ್ದತೆಯಿಂದ ಬೆಳೆ ಮೇಲೆ ನೇರ ಪರಿಣಾಮ ಬೀರಿದೆ.

### ತಜ್ಞರ ತಂಡದಿಂದ ಪರಿಶೀಲನೆ

ಕಾರೆಕೆರೆ ಕೃಷಿ ಮಹಾವಿದ್ಯಾಲಯ, ಮಂಡ್ಯ ಹಾಗೂ ಕೇಂದ್ರ ಸರ್ಕಾರದ ವಿಜ್ಞಾನಿಗಳ ತಂಡ ಭೂಪ್ರದೇಶಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಈ ಕುರಿತು ಜಿಲ್ಲಾಡಳಿತ ಸರಣಿ ಸಭೆಗಳನ್ನು ನಡೆಸಿ ರೋಗ ಹತೋಟಿಗೆ ಹಲವಾರು ಕ್ರಮ ಕೈಗೊಂಡಿತು. ಆದರೂ ನಿಯಂತ್ರಣಕ್ಕೆ ಬಾರದಂತೆ ರೋಗ ಹರಡಿದ್ದು ಅನ್ನದಾತರನ್ನು ನಷ್ಟಕ್ಕೆ ದೂಡಿದೆ. ಜಿಲ್ಲಾದ್ಯಂತ ಮುಸುಕಿನ ಜೋಳಕ್ಕೆ ಬಿಳಿಸುಳಿ ರೋಗ ಕಾಣಿಸಿಕೊಳ್ಳುತ್ತಿದ್ದಂತೆ ಕೃಷಿ ವಿಕಸಿತ ಸಂಕಲ್ಪ ಅಭಿಯಾನದಡಿ ರೈತರಿಗೆ ತಿಳವಳಿಕೆ ಮೂಡಿಸಲಾಯಿತಾದರೂ ಅಷ್ಟರಲ್ಲಿ ಪರಿಸ್ಥಿತಿ ಕೈ ಮೀರಿತ್ತು.

ಈ ಸಮಸ್ಯೆ ಹೆಚ್ಚಾಗಲು ಕಳಪೆ ಬಿತ್ತನೆ ಬೀಜ ವಿತರಣೆಯೇ ಕಾರಣವೆಂದು ಅಧಿಕಾರಿಗಳು ವರದಿಯಲ್ಲಿ ಪ್ರಸ್ತಾಪಿಸಿದ್ದರಿಂದ ಬೀಜ ವಿತರಣೆ ಮಾಡಿದ ಎಲ್ಲಾ ಕಂಪನಿ ಹಾಗೂ ವಿತರಕರ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ. ಬೆಳೆ ನಷ್ಟದ ನಿಖರ ಮಾಹಿತಿಗಾಗಿ ತಾಲ್ಲೂಕು ಮಟ್ಟದಲ್ಲಿ ತಹಶೀಲ್ದಾರ್ ಅಧ್ಯಕ್ಷತೆಯಲ್ಲಿ ಸಹಾಯಕ ಕೃಷಿ ನಿರ್ದೇಶಕರು, ರೈತ ಮುಖಂಡರ ನೇತೃತ್ವದಲ್ಲಿ ಸರ್ವೆ ನಡೆಸಲಾಗಿದೆ. ಜಿಲ್ಲೆಯಲ್ಲಿ 11,929 ರೈತರ 5655 ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ಹಾನಿಯಾಗಿರುವುದನ್ನು ದೃಢಪಡಿಸಲಾಗಿದೆ.

### ರೈತರಿಂದ ಪ್ರತಿಭಟನೆ

ಮುಸುಕಿನ ಜೋಳಕ್ಕೆ ಬಿಳಿಸುಳಿ ರೋಗ ಕಾಣಿಸಿಕೊಂಡ ಹಿನ್ನೆಲೆ ತಕ್ಷಣ ಪರಿಹಾರ ಕಲ್ಪಿಸಬೇಕು ಹಾಗೂ ಬಿತ್ತನೆ ಬೀಜ ವಿತರಿಸಿರುವವರ ವಿರುದ್ಧ ಕ್ರಮ ಜರುಗಿಸಬೇಕೆಂದು ಜಿಲ್ಲೆಯ ವಿವಿಧೆಡೆ ಅನ್ನದಾತರು ಪ್ರತಿಭಟನೆ ನಡೆಸಿದ್ದರಿಂದ ಸಮಸ್ಯೆಯನ್ನು ಜಿಲ್ಲಾಡಳಿತ ಗಂಭೀರವಾಗಿ ಪರಿಗಣಿಸಿತು. ಆ. 18 ರಂದು ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ ರೈತರ ಸಭೆಯಲ್ಲೂ ಈ ವಿಚಾರ ಚರ್ಚೆಗೊಳಗಾಯಿತು. ಈ ಎಲ್ಲಾ ಅಂಶಗಳನ್ನು ಗಂಭೀರವಾಗಿ ಪರಿಗಣಿಸಿದ ಜಿಲ್ಲಾಧಿಕಾರಿ ಅವರು ವಿಶೇಷ ಪ್ರಕರಣವೆಂದು ಪರಿಗಣಿಸಿ ಪರಿಹಾರ ಬಿಡುಗಡೆ ಮಾಡುವಂತೆ ಮನವಿ ಮಾಡಿದ್ದಾರೆ.

### ಮುಸುಕಿನ ಜೋಳ ತಾಲ್ಲೂಕುವಾರು ನಷ್ಟದ ವಿವರ (ಹೆಕ್ಟೇರ್‌ಗಳಲ್ಲಿ)

| ತಾಲ್ಲೂಕು | ಬಿತ್ತನೆ ಪ್ರದೇಶ | ನಷ್ಟಕ್ಕೀಡಾದ ಪ್ರದೇಶ | ರೈತರ ಸಂಖ್ಯೆ |
|---|---|---|---|
| ಆಲೂರು | 11750 | 337.2 | 919 |
| ಅರಕಲಗೂಡು | 20500 | 79.68 | 134 |
| ಅರಸೀಕೆರೆ | 4850 | 504.8 | 884 |
| ಬೇಲೂರು | 11630 | 1402 | 2900 |
| ಚನ್ನರಾಯಪಟ್ಟಣ | 9185 | 484.8 | 1994 |
| ಹಾಸನ | 29990 | 2239 | 3680 |
| ಹೊಳೆನರಸೀಪುರ | 13160 | 608.1 | 1418 |
| ಒಟ್ಟು | 101065 | 5655.60 | 11,929 |

## ಪ್ರಕೃತಿ ಉಳಿಸಲು ಸಾಲುಮರದ ತಿಮ್ಮಕ್ಕ ನಡೆ ಮಾದರಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಆಲೂರು: ಸಾಲುಮರದ ತಿಮ್ಮಕ್ಕ ಅವರು ಅವಿದ್ಯಾವಂತರಾಗಿದ್ದರೂ ಪರಿಸರ, ಪ್ರಕೃತಿಯ ಮಹಿಮೆ ಬಗ್ಗೆ ಎಲ್ಲರಿಗೂ ತಿಳಿಯುವಂತೆ ಮನದಟ್ಟು ಮಾಡುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ಜೆಎಂಎಫ್‌ಸಿ ನ್ಯಾಯಾಧೀಶೆ ಎಂ. ಸ್ನೇಹಾ ತಿಳಿಸಿದರು.

ಬಿಕ್ಕೋಡು ರಸ್ತೆಯಲ್ಲಿರುವ ಜೆಎಂಎಫ್‌ಸಿ ನ್ಯಾಯಾಲಯದ ಆವರಣದಲ್ಲಿ ತಾಲೂಕು ವಕೀಲರ ಸಂಘದ ವತಿಯಿಂದ ಸಾಲುಮರದ ತಿಮ್ಮಕ್ಕ ಅವರಿಗೆ ಏರ್ಪಡಿಸಿದ್ದ ಶ್ರದ್ಧಾಂಜಲಿ ಕಾರ್ಯಕ್ರಮದಲ್ಲಿ ಸಸಿಗಳನ್ನು ನೆಟ್ಟು ಮಾತನಾಡಿದರು.

ಪರಿಸರ ಪ್ರೀತಿ ಮತ್ತು ಕಾಳಜಿಯನ್ನು ಯುವಜನತೆ ತಿಳಿಯದಿದ್ದರೆ ಭವಿಷ್ಯದಲ್ಲಿ ಹವಾಮಾನ ಏರುಪೇರಾಗಿ ಮಾನವ ಮತ್ತು ಪ್ರಾಣಿ ಪಕ್ಷಿಗಳ ಜೀವನ ಅನಾರೋಗ್ಯಕ್ಕೀಡಾಗುತ್ತದೆ. ತಿಮ್ಮಕ್ಕ ಅವರು ತನ್ನ ಜೀವನವನ್ನು ಗಿಡಗಳನ್ನು ನೆಟ್ಟು ಬೆಳೆಸಲು ಮುಡುಪಾಗಿಟ್ಟರು. ಅವರು ನಾಡಿಗಲ್ಲದೆ ಪ್ರಪಂಚಕ್ಕೆ ಮಾದರಿಯಾಗಿ ಬದುಕಿದರು ಎಂದರು.

ಪ್ರಕೃತಿಗೆ ತಿಮ್ಮಕ್ಕ ಅವರು ಕೊಟ್ಟ ಕೊಡುಗೆ ಅಪಾರ. ವಿದ್ಯೆ ಇಲ್ಲದಿದ್ದರೂ ಸಹ ವಿದ್ಯಾವಂತರಿಗೆ ಸಾಲುಮರದ ತಿಮ್ಮಕ್ಕನಿಗೆ ತುಂಬು ಹೃದಯದ ನಮನಗಳು ಎಂದು ಸಂತಾಪ ಸೂಚಿಸಿದರು. ವಕೀಲರ ಸಂಘದ ಅಧ್ಯಕ್ಷ ಎಂ.ಎಸ್. ಮಹೇಶ್ ಮಾತನಾಡಿ, ರಾಜ್ಯ ಮತ್ತು ಕೇಂದ್ರ ಸರ್ಕಾರದಲ್ಲಿ ತಿಮ್ಮಕ್ಕ ಅವರ ನೆನಪು ಅಜರಾಮರವಾಗಿದೆ. ತಿಮ್ಮಕ್ಕ ಅವರು ಪರಿಸರ ಕಾಳಜಿಯಲ್ಲಿ ಅಪಾರ ಪರಿಶ್ರಮ ಹೊಂದಿದ್ದರು. ತಾಲೂಕಿನಲ್ಲಿ ಹಾದು ಹೋಗಿರುವ ರಾಷ್ಟ್ರೀಯ ಹೆದ್ದಾರಿ 75ರ ರಸ್ತೆ ಅಗಲೀಕರಣ ಕಾಮಗಾರಿಯಿಂದ ರಸ್ತೆ ಬದಿಯಲ್ಲಿರುವ ಸಾವಿರಾರು ಮರಗಳನ್ನು ಕಡಿದು ಹಾಕಲಾಗಿದೆ. ತಿಮ್ಮಕ್ಕ ಹೆಸರು ಸದಾ ಹಸಿರಾಗಿರಲು, ಹೆದ್ದಾರಿ ಕಾಮಗಾರಿ ಪೂರ್ಣಗೊಂಡ ನಂತರ ಅರಣ್ಯ ಇಲಾಖೆ ಸಹಕಾರದೊಂದಿಗೆ ಎಲ್ಲರೂ ಸೇರಿ ಗಿಡಗಳನ್ನು ನೆಟ್ಟು ಪೋಷಿಸಲು, ಸ್ಥಳೀಯ ಸಂಘಸಂಸ್ಥೆಗಳ ನೆರವಿನೊಂದಿಗೆ ಕಾರ್ಯಗತ ಮಾಡೋಣ ಎಂದರು.

ಸಹಾಯಕ ಸರ್ಕಾರಿ ಅಭಿಯೋಜಕ ವಿಜಯ ಸಂಪಾಂಗವಿ, ವಕೀಲರಾದ ಮಂಜೇಗೌಡ, ಬಿ.ಡಿ ಸಂದೀಪ್, ರವಿಶಂಕರ್, ಕೆ.ಎನ್. ನಾಗರಾಜ್, ಟಿ. ಮಂಜುನಾಥ್, ಕೀರ್ತಿಕುಮಾರ್, ದುಷ್ಯಂತ್ ಮತ್ತು ವಕೀಲರ ಸಂಘದ ಸದಸ್ಯರು ಹಾಜರಿದ್ದರು.

## ಅರಸೀಕೆರೆಯಲ್ಲಿ ರಂಗೇರಿದ ನಗರಸಭೆ ಚುನಾವಣೆ ಅಖಾಡ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ನಗರ ಮತ್ತೊಂದು ಚುನಾವಣೆಗೆ ಸಿದ್ಧವಾಗುತ್ತಿದೆ. ಆಸಕ್ತಿಯೋ ನಿರಾಸಕ್ತಿಯೋ ಆದರೂ ಸಂವಿಧಾನದತ್ತ ತಮ್ಮ ಅಧಿಕಾರವನ್ನು ಚಲಾಯಿಸಲು ನಗರದ ಮತದಾರರು ನೆಚ್ಚಿನ ಅಭ್ಯರ್ಥಿಯ ಹುಡುಕಾಟದಲ್ಲಿದ್ದರೆ ಇತ್ತ ಮತದಾರರ ಸೆಳೆಯಲು ಸ್ಪರ್ಧಾಕಾಂಕ್ಷಿಗಳು ಮತ ಬ್ಯಾಂಕ್ ಅನ್ನು ಭದ್ರಪಡಿಸಿಕೊಳ್ಳಲು ಕಸರತ್ತು ಆರಂಭಿಸಿದ್ದಾರೆ.

ನಗರಸಭೆ 31 ವಾರ್ಡ್‌ಗಳನ್ನು ಒಳಗೊಂಡಿದ್ದು ಪ್ರತಿ ವಾರ್ಡ್‌ನಲ್ಲೂ ಹತ್ತಾರು ಜನ ಅಭ್ಯರ್ಥಿಯಾಗುವ ಇಂಗಿತ ವ್ಯಕ್ತಪಡಿಸುತ್ತಿದ್ದಾರೆ. ಕೆಲವರಂತೂ ಯಾವುದೇ ಪಕ್ಷ ಬಿ ಫಾರಂ ನೀಡದಿದ್ದರೂ ಸ್ವತಂತ್ರ ಅಭ್ಯರ್ಥಿಯಾಗಿ ಆದರೂ ಸ್ಪರ್ಧಿಸಿ ನಗರಸಭೆ ಪ್ರವೇಶಿಸುವ ವಿಶ್ವಾಸದೊಂದಿಗೆ ಸಜ್ಜಾಗುತ್ತಿರುವುದು ಗಮನಾರ್ಹವಾಗಿದೆ.




ಕುತೂಹಲದ ವಿಷಯವೆಂದರೆ ತಮ್ಮ ಅವಧಿ ಇನ್ನು ಪೂರ್ಣಗೊಂಡಿಲ್ಲ. ನಮ್ಮ ಅಧಿಕಾರ ಮೊಟಕುಗೊಳಿಸಲಾಗಿದೆ ಎಂದು ನಿಕಟಪೂರ್ವ ಅಧ್ಯಕ್ಷ ಎಂ. ಸಮೀವುಲ್ಲಾ ಹೈಕೋರ್ಟ್ ಮೆಟ್ಟಿಲೇರಿದ್ದಾರೆ.

ಹೈಕೋರ್ಟ್ ಸಮೀವುಲ್ಲಾ ಅವರ ಮನವಿಯನ್ನು ಪುರಸ್ಕರಿಸುತ್ತದೆಯೋ ಅಥವಾ ಪೌರಾಡಳಿತ ಇಲಾಖೆ ತೆಗೆದುಕೊಂಡಿರುವ ನಿರ್ಧಾರವನ್ನು ಎತ್ತಿ ಹಿಡಿಯುತ್ತದೆಯೋ ಕಾದುನೋಡಬೇಕಿದೆ. ಕಳೆದ ಚುನಾಯಿತ ಪ್ರತಿನಿಧಿಗಳ ಅಧಿಕಾರ ಮುಂದುವರಿಕೆಯೋ ಅಥವಾ ಚುನಾವಣೆ ಎದುರಿಸುವಂತೆಯೋ ಯಾವ ರೀತಿಯ ತೀರ್ಪು ಹೊರ ಬರುತ್ತದೆಯೋ ಸದ್ಯ ಗೊತ್ತಿಲ್ಲ. ಈ ಕುರಿತು ನ್ಯಾಯಪೀಠ ಸಮಗ್ರ ವಿಚಾರಣೆ ನಡೆಸುತ್ತಿದ್ದು ಹೈಕೋರ್ಟ್ ತೀರ್ಪು ವರ ಬೀಳುವ ತನಕ ಏನನ್ನು ಹೇಳಲು ಸಾಧ್ಯವಿಲ್ಲ ಎನ್ನುತ್ತಾರೆ ವಕೀಲ ವಿವೇಕ್.

ಮತದಾರರು ತಮ್ಮ ಮತದಾನದ ಮೂಲಕ ನಮ್ಮನ್ನು ಆಶೀರ್ವದಿಸಿ ಅವರ ಸೇವೆ ಮಾಡಲು ಅವಕಾಶ ಕಲ್ಪಿಸಿ ಕೊಟ್ಟಿದ್ದಾರೆ. ಆದರೆ ಸೇವಾ ಅವಧಿಗೂ ಮುನ್ನವೇ ನಗರಸಭೆ ಅಧಿಕಾರ ಮುಕ್ತಾಯವಾಗುತ್ತಿರುವುದು ಮತದಾನದ ಮೌಲ್ಯಕ್ಕೆ ಅಪಮಾನ ಮಾಡಿದಂತಾಗುತ್ತದೆ. ಹಾಗಾಗಿ ಇದನ್ನ ಹೈಕೋರ್ಟ್ ನಲ್ಲಿ ಪ್ರಶ್ನಿಸಿದ್ದು ಘನ ನ್ಯಾಯಾಲಯವು ಸೂಕ್ತ ತೀರ್ಪು ನೀಡಲಿದೆ ಎಂಬ ವಿಶ್ವಾಸವಿದೆ ಎಂದು ಎಂ. ಸಮೀವುಲ್ಲಾ ಹೇಳಿದ್ದಾರೆ.

## ಸರ್ಕಾರಿ ಶಾಲೆಗಳಿಂದಷ್ಟೇ ಕನ್ನಡ ಉಳಿವು: ನಾಗಲಕ್ಷ್ಮಿ ಬಾಲಾಜಿ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಆಲೂರು: ಶೋಷಿತ ಹಾಗೂ ತಳ ಸಮುದಾಯದ ಮಕ್ಕಳು ಶಿಕ್ಷಿತರಾದರೆ ಮಾತ್ರ ದೇಶದ ಪ್ರಗತಿ ಸಾಧ್ಯ. ತಳ ಸಮುದಾಯದ ಮಕ್ಕಳಿಂದಲೇ ಸರ್ಕಾರಿ ಶಾಲೆಗಳು ಮುನ್ನಡೆಯುತ್ತಿರುವುದು. ಸರ್ಕಾರಿ ಶಾಲೆಗಳು ಸಬಲೀಕರಣವಾದಾಗ ಮಾತ್ರ ಕನ್ನಡ ಭಾಷಾ ಬೆಳವಣಿಗೆ ಸಾಧ್ಯ ಎಂದು ಸಮಾಜ ಸೇವಕಿ ಎ.ಬಿ. ನಾಗಲಕ್ಷ್ಮಿ ಬಾಲಾಜಿ ಅಭಿಪ್ರಾಯಪಟ್ಟರು.

ತಾಲೂಕಿನ ತಾಳೂರು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ತಮ್ಮ ವಿವಾಹ ವಾರ್ಷಿಕೋತ್ಸವ ನಿಮಿತ್ತ ಮಕ್ಕಳಿಗೆ ಲೇಖನ ಸಾಮಗ್ರಿ ವಿತರಿಸಿ ಮಾತನಾಡಿ, ಪ್ರತಿಯೊಬ್ಬರು ತಮ್ಮ ಜನ್ಮದಿನ, ಮದುವೆ ದಿನಗಳಂತಹ ವಿಶೇಷ ಘಳಿಗೆಗಳನ್ನು ಯಾವುದಾದರೂ ಒಂದು ಶಾಲಾ ಮಕ್ಕಳಿಗೆ ಅಗತ್ಯವಿರುವ ವಸ್ತುಗಳನ್ನು ನೀಡಿ, ಮಕ್ಕಳಲ್ಲಿ ಉಂಟಾಗುವ ಸಂತಸವನ್ನು ಸಂಭ್ರಮಿಸುವ ತೃಪ್ತಿ ಬೇರೆಲ್ಲೂ ಸಿಗಲಾರದು. ಮಕ್ಕಳು ಉತ್ತಮವಾಗಿ ವಿದ್ಯಾಭ್ಯಾಸ ಮಾಡಿ ಸಮಾಜದಲ್ಲಿ ಒಳ್ಳೆಯ ವ್ಯಕ್ತಿಗಳಾಗಿ ರೂಪುಗೊಳ್ಳಬೇಕು ಎಂದರು.

ಕವಯಿತ್ರಿ ವಾಣಿ ಮಹೇಶ್ ಮಾತನಾಡಿ, ಸಮಾಜ ನಮಗೇನು ಕೊಟ್ಟಿದೆ ಎನ್ನುವುದಕ್ಕಿಂತಲೂ ಸಮಾಜಕ್ಕಾಗಿ ನಾವೇನು ಕೊಟ್ಟಿದ್ದೇವೆ ಎನ್ನುವುದು ಮುಖ್ಯ. ಈ ನಿಟ್ಟಿನಲ್ಲಿ ನಾಗಲಕ್ಷ್ಮಿಯವರು ತಮ್ಮ ಜನ್ಮದಿನ ಹಾಗೂ ವಿವಾಹ ವಾರ್ಷಿಕೋತ್ಸವ ನಿಮಿತ್ತ ಪ್ರತಿವರ್ಷ ಜಿಲ್ಲೆಯ ನೂರಾರು ಸರ್ಕಾರಿ ಶಾಲಾ ಮಕ್ಕಳಿಗೆ ಉಚಿತ ನೋಟ್ ಪುಸ್ತಕ, ಲೇಖನ ಸಾಮಗ್ರಿ ಕೊಡುಗೆಯಾಗಿ ನೀಡುತ್ತಿದ್ದಾರೆ. ಹಾಸನದಿಂದ ಆಲೂರು ತಾಲೂಕಿನ ತಾಳೂರಿಗೆ ಬಂದು ಇಲ್ಲಿಯ ಮಕ್ಕಳ ಅಭ್ಯುದಯಕ್ಕಾಗಿ, ಅವರ ಕಲಿಕೆಗೆ ಉತ್ತೇಜನ ನೀಡುವ ಮೂಲಕ ನಾಗಲಕ್ಷ್ಮಿಯವರು ಮಾದರಿ ಕಾರ್ಯ ಮಾಡುತ್ತಿದ್ದಾರೆ. ಪ್ರತಿಯೊಬ್ಬ ಪ್ರಜೆಯೂ ಈ ರೀತಿ ಯೋಚಿಸಿದಾಗ ಸರ್ಕಾರಿ ಶಾಲೆಗಳು ಬೇಗ ಸಬಲೀಕರಣವಾಗುತ್ತವೆ. ಸರ್ಕಾರಿ ಶಾಲೆಯ ಮಕ್ಕಳ ಸರ್ವಾಂಗೀಣ ಪ್ರಗತಿಗೆ ಕೇವಲ ಶಿಕ್ಷಕ, ಪೋಷಕರಿಂದ ಮಾತ್ರವಲ್ಲದೇ ಸಮುದಾಯದಿಂದ ಪ್ರೋತ್ಸಾಹ ಸಿಕ್ಕಾಗ ಸಾಧಿತವಾಗುತ್ತದೆ ಎಂದರು. ಆಲೂರು ತಾಲೂಕು ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಡಿ.ಎಂ. ವರದರಾಜು ಮಾತನಾಡಿ, ಕರ್ನಾಟಕದಲ್ಲಿ ಕನ್ನಡ ಭಾಷೆ ಉಳಿಯಬೇಕಾದರೆ ಅದು ಸರ್ಕಾರಿ ಕನ್ನಡ ಮಾಧ್ಯಮ ಶಾಲೆಗಳಿಂದ ಮಾತ್ರ ಸಾಧ್ಯ. ಸರ್ಕಾರಿ ಕನ್ನಡ ಶಾಲೆಗಳನ್ನು ಉನ್ನತೀಕರಿಸುವುದು, ಕಲಿಕೆಯ ಗುಣಾತ್ಮಕತೆಯನ್ನು ಹೆಚ್ಚಿಸುವುದು ನಮ್ಮೆಲ್ಲರ ಕರ್ತವ್ಯ. ಈ ನಿಟ್ಟಿನಲ್ಲಿ ಸಮುದಾಯದ ಸಹಕಾರ ಅತ್ಯಗತ್ಯವಾಗಿದೆ. ಹಾಸನದಿಂದ ಗ್ರಾಮಾಂತರ ಪ್ರದೇಶದಲ್ಲಿರುವ ತಾಳೂರು ಶಾಲೆಗೆ ಬಂದು ನಮ್ಮ ಮಕ್ಕಳಿಗೆ ಅಗತ್ಯವಿರುವ ಕಲಿಕಾ ಸಾಮಾಗ್ರಿಗಳನ್ನು ವಿತರಿಸಿ ಮಕ್ಕಳೊಂದಿಗೆ ಸಂಭ್ರಮಿಸುವ ನಾಗಲಕ್ಷ್ಮಿಯವರ ಆಸಕ್ತಿ, ಸಾಮಾಜಿಕ ಕಳಕಳಿ ಮಾದರಿಯಾಗಿದೆ ಎಂದರು.

## ಉದ್ದಿಮೆದಾರರು ಸಂಪೂರ್ಣ ಮಾಹಿತಿ ಹೊಂದುವುದು ಅವಶ್ಯ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಉದ್ದಿಮೆದಾರರು ಕೈಗಾರಿಕೆಗಳನ್ನು ಪ್ರಾರಂಭಿಸಲು ಕೇವಲ ಕೈಗಾರಿಕೆಗಳ ಬಗ್ಗೆ ಮಾತ್ರವಲ್ಲ ವಿದ್ಯುತ್, ನೀರು, ಉದ್ಯೋಗ ಸೃಷ್ಟಿ, ಬ್ಯಾಂಕ್ ಸಾಲ ಸೌಲಭ್ಯಗಳ ಬಗ್ಗೆಯೂ ಮಾಹಿತಿ ಹೊಂದಿರಬೇಕು ಎಂದು ಕಾಸಿಯಾ ಸಂಸ್ಥೆ ಅಧ್ಯಕ್ಷ ಬಿ.ಆರ್. ಗಣೇಶ್ ರಾವ್ ತಿಳಿಸಿದರು.

ನಗರದ ಖಾಸಗಿ ಹೋಟೆಲ್‌ನಲ್ಲಿ ಎಂ.ಎಸ್.ಎಂ.ಇ ಉದ್ದಿಮೆಗಳು ತಮ್ಮ ಸಾಮರ್ಥ್ಯವನ್ನು ಮತ್ತು ಆರ್ಥಿಕ ಗುಣಮಟ್ಟವನ್ನು ಹೆಚ್ಚಿಸಿಕೊಳ್ಳಲು ಎಂ.ಎಸ್.ಎಂ.ಇ ಉದ್ದಿಮೆದಾರರಿಗೆ ಕಾಸಿಯಾ, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕೆಗಳ ಸಂಘದಿಂದ ನಡೆದ ಒಂದು ದಿನದ ಐಎಂಒ ಯೋಜನೆ ಮತ್ತು **ZED** ಕಾರ್ಯಾಗಾರದಲ್ಲಿ ಮಾತನಾಡಿದರು.

ಮಲೆನಾಡು ಭಾಗದಲ್ಲಿ ಹೆಚ್ಚಿನ ಕೈಗಾರಿಕೆಗಳು ಬೆಳೆಯಬೇಕಾಗಿದೆ. ಉದ್ದಿಮೆದಾರರಿಗೆ ಸಾಕಷ್ಟು ತೊಂದರೆಗಳಿದ್ದು, ಈ ರೀತಿಯ ಕಾರ್ಯಕ್ರಮಗಳ ಮೂಲಕ ಸಲಹೆ ಸೂಚನೆ ಸಿಗುತ್ತದೆ. ಉದ್ದಿಮೆದಾರರಿಗೆ ಕೇವಲ ತರಬೇತಿ ಜೊತೆಯಲ್ಲಿ ಕೈಗಾರಿಕೆಗಳ ಬಗ್ಗೆ ಮಾಹಿತಿ ತಿಳಿದುಕೊಳ್ಳುವುದು ಹಾಗೂ ಕೈಗಾರಿಕೆಗಳನ್ನು ಪ್ರಾರಂಭಿಸಲು ವಿದ್ಯುತ್, ನೀರು, ಉದ್ಯೋಗ ಇವುಗಳ ಬಗ್ಗೆ ಸಾಕಷ್ಟು ವಿಚಾರ ತಿಳಿದುಕೊಂಡು ಬ್ಯಾಂಕ್‌ನ ಸಹಕಾರದೊಂದಿಗೆ ಕೈಗಾರಿಕೆಗಳು ಅಭಿವೃದ್ಧಿಯಾಗಬೇಕೆಂದು ಕರೆ ನೀಡಿದರು.

ಜಿಲ್ಲಾ ಕೈಗಾರಿಕಾ ಕೇಂದ್ರದ ನಿರ್ದೇಶಕ ವಿ.ಉಮೇಶ ಮತನಾಡಿ, ಹಾಸನದಲ್ಲಿ ಇರುವ ಎಂಎಸ್‌ಎಂಇ ಉದ್ದಿಮೆದಾರರು ಕೇಂದ್ರ ಸರ್ಕಾರದ **AMP** ಯೋಜನೆಯಡಿಯಲ್ಲಿರುವ **ZED & LEAN** ಕಾರ್ಯಾಗಾರದ ಉದ್ದೇಶವನ್ನು ಸ್ಥಳೀಯ ಎಂ.ಎಸ್.ಎಂ.ಇ ಉದ್ದಿಮೆದಾರರು ಅಳವಡಿಸಿಕೊಂಡು ಉತ್ತಮ ಗುಣಮಟ್ಟದ ಉತ್ಪನ್ನಗಳನ್ನು ತಯಾರು ಮಾಡುವುದು ಹಾಗೂ ರಫ್ತು ಮಾಡುವುದರಿಂದ ತಮ್ಮ ಆರ್ಥಿಕ ಗುಣಮಟ್ಟದಲ್ಲಿ ಸಬಲರಾಗಬೇಕೆಂದು ಮತ್ತು ಸರ್ಕಾರದ ಯೋಜನೆಗಳನ್ನು ಸದುಪಯೋಗಪಡಿಸಿಕೊಳ್ಳಬೇಕೆಂದು ತಿಳಿಸಿದರು.

ಲಘು ಉದ್ಯೋಗ ಭಾರತಿ ನಿರ್ದೇಶಕ ಮದನ್ ಕುಮಾರ್ ಮಾತನಾಡಿ, ಎಂಎಸ್‌ಎಂಇ ಉದ್ದಿಮೆದಾರರು ಉತ್ಪಾದಿಸುವ ಉತ್ಪನ್ನಗಳಲ್ಲಿ **Zero Effect Zero Deffect Policy** ಯನ್ನು ಅಳವಡಿಸಿಕೊಂಡು ಉತ್ತಮ ಗುಣಮಟ್ಟದ ಉತ್ಪನ್ನಗಳನ್ನು ತಯಾರಿಸಿ ವಿದೇಶಗಳಿಗೆ ರಫ್ತು ಮಾಡುವ ಬಗ್ಗೆ ಯೋಚಿಸಬೇಕೆಂದು ತಿಳಿಸಿದರು.

## ಇತಿಹಾಸದಲ್ಲಿ ಈ ದಿನ

### ನವೆಂಬರ್-20

1945: ನಾಜಿ ಯುದ್ಧ ಅಪರಾಧಿಗಳನ್ನು ವಿಚಾರಣೆ ಮಾಡಲು ಪ್ರಸಿದ್ಧ ನ್ಯೂರಂಬರ್ಗ್ ಟ್ರಯಲ್ಸ್ ಆರಂಭವಾದ ದಿನ.

1959: ಯುಎನ್ ಘೋಷಿಸಿದ್ದ ವಿಶ್ವ ಶಿಶು ಹಕ್ಕುಗಳ ಘೋಷಣೆ ಅಂಗೀಕಾರ.

1985: ಮೈಕ್ರೋಸಾಫ್ಟ್ ವಿಂಡೋಸ್ 1.0 ಅಧಿಕೃತವಾಗಿ ಬಿಡುಗಡೆ.

1998: ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣ ನಿರ್ಮಾಣದ ಮೊದಲ ಭಾಗ ಬಾಹ್ಯಾಕಾಶಕ್ಕೆ ಉಡಾವಣೆ.

**ಜನನ**

1750: ಜರ್ಮನ್ ನಾಟಕಕಾರ ಹಾಗೂ ತತ್ವಜ್ಞ ಫ್ರೀಡ್ರಿಕ್ ಶಿಲ್ಲರ್

1925: ಪ್ರಸಿದ್ಧ ಅಮೇರಿಕನ್ ವಿಜ್ಞಾನಿ ರಾಬರ್ಟ್ ಕೆನ್ನೆಡಿ

**ಮರಣ**

1910: ಪ್ರಸಿದ್ಧ ರಷ್ಯನ್ ಸಾಹಿತ್ಯ ಮಹನೀಯ ಲಿಯೋ ಟಾಲ್ಸ್ಟಾಯ್

1958: ಪ್ರಸಿದ್ಧ ಇಟಾಲಿಯನ್ ಕಾದಂಬರಿಗಾರ ಜಿಯೋವಾನಿ ಪಪಿನಿ

## ಆರಡಿ ಮನುಷ್ಯ ಮೂರಂಗುಲ ನಾಲಿಗೆಯ ದಾಸ

**- ವಿಶ್ವಾಸ್ ಡಿ. ಗೌಡ**


ಮಕ್ಕಳು ಬೇಡಿದ್ದನ್ನು ಕೊಡಿಸುವ ಮುಂಚೆ ಈ ಕಥೆಯನ್ನು ದಯವಿಟ್ಟು ಓದಿ.. ಇದು ಕಥೆಯಲ್ಲ ಕಥಾರೂಪದ ವಾಸ್ತವ...

ಇತ್ತೀಚೆಗೆ ಒಂದು ಚಟ. ಮನೆಯಲ್ಲಿ ಮಾಡಿದ ಅಡುಗೆ ಬೇರೆ. ಮಕ್ಕಳಿಗೆ ಮಾಡುವ ಅಡುಗೆ ಬೇರೆ. ಮನೆಯವರಿಗೆಲ್ಲ ಉಪ್ಪಿಟ್ಟು. ಮಗು ಮೂಗು ಮುರಿಯುತ್ತದೆ, ಅಳುತ್ತದೆ. ಬೇರೆ ಏನನ್ನೋ ಬೇಡುತ್ತದೆ. ಅಮ ಅದರ ಅಪೇಕ್ಷೆ ಕೇಳುತ್ತಾಳೆ. ಅದಕ್ಕೆ ನೂಡಲ್ಸ್, ಪಿಜ್ಜಾ, ಬರ್ಗರ್ ಇನ್ನೇನೋ ಬೇಕು. ಮಗು ಅಳಬಾರದು. ಅಂತೂ ಅದರ ಅಪೇಕ್ಷೆ ಒದಗಿಸಬೇಕು. ಇದೀಗ ಎಲ್ಲ ಮನೆಗಳ ಕಥೆ. ಮಗುವಿನ ಅಪೇಕ್ಷೆಗೆ ಆದ್ಯತೆ. ಅದು ಅತ್ತರೆ ಅಪ್ಪ ಬಯ್ಯುವುದು ಅಮ್ಮನನ್ನೇ.

ಹೀಗೆ ಮಾಡಿದರೆ ಏನು ತಪ್ಪು? ಹಿಂದೆ ಅಷ್ಟು ಸೌಕರ್ಯ ಇರಲಿಲ್ಲ. ಬಡತನ ಇತ್ತು. ಈಗ ಕೊಡುವ ತಾಕತ್ತು ಇದೆ ಕೊಡಿಸಲಿ? ನಾವು ಹಾಕಿದ್ದು ತಿಂದಿದ್ದೇವೆ ಅಂತ ಅವರು ಯಾಕೆ ತಿನ್ನಬೇಕು. ನಮಗೆ ಬೇರೆ ಗತಿಯಿರಲಿಲ್ಲ. ಹೀಗೆ ಒಂದು ವಾದವೂ ಇದೆ.

ಬಹಳ ಹಿಂದೆ ಅಶ್ವತ್ಥಾಮ ಎಂಬ ಮಗು ಇದ್ದ. ಮಹಾತಪಸ್ವಿ ದ್ರೋಣನ ಮಗ. ಹೊಲದಲ್ಲಿ ಬಿದ್ದ ಧಾನ್ಯ ಆರಿಸಿ ತಂದು ಊಟ ಮಾಡುತ್ತಿದ್ದವ ದ್ರೋಣ. ಅಂತಿಂಥ ತಪಸ್ವಿಯಲ್ಲ. ನಿಜವಾದ ಬ್ರಾಹ್ಮಣ.

ಅವನಿಗೆ ಕೃಪಾಚಾರ್ಯರ ತಂಗಿ ಕೃಪಿ ಹೆಂಡತಿ. ಈ ಕೃಪಾಚಾರ್ಯರು ಕೌರವರ ಗುರುಗಳು. ದ್ರೋಣಾಚಾರ್ಯರು ಇವರಿಂದ ತುಂಬಾ ದೂರ. ಆದರೆ



ಮಗುವಿಗೆ ಕೃಪಾಚಾರ್ಯರು ಮಾವ. ಈ ಮಾವ ಅರಮನೆಗೆ ಹತ್ತಿರ. ಮಾವನ ಕಾರಣಕ್ಕೆ ಈ ಮಗುವೂ ಅಂದರೆ ಅಶ್ವತ್ಥಾಮನೂ ಅರಮನೆ ಹೊಕ್ಕ. ಅಲ್ಲಿ ಅವ ನೋಡಿದ್ದು ದೊಡ್ಡವರನ್ನು. ದೊಡ್ಡವರ ಊಟವೇ ಬೇರೆ. ಪೇಯವೂ ಬೇರೆ. ಮಗು ಅವರಲ್ಲಿ ಹಾಲು ಕುಡಿಯಿತು. ಈ ಹಾಲನ್ನು ಮನೆಯಲ್ಲಿ ಕೇಳಿತು. ಎಲ್ಲಿಂದ ಕೊಡಬೇಕು ಈ ಬಡ ಬ್ರಾಹ್ಮಣ ತಪಸ್ವಿಯ ಹೆಂಡತಿ?... ಅವಳು ಹಿಟ್ಟಿಗೆ ನೀರು ಸೇರಿಸಿ ಕೊಟ್ಟಳು. ಮಗು ಇದು ಅದಲ್ಲ ಎಂದಿತು. ಹೋಲಿಕೆ ಎಲ್ಲ ದುಃಖದ ಮೂಲ. ಮಗು ಆ ಅದೇ ಹಾಲನ್ನು ಕೇಳಿತು. ನಿತ್ಯ ಒತ್ತಾಯ. ತಾಯಿಗೆ ಸಂಕಟ. ಗಂಡನನ್ನು ಮೊರೆಹೊಕ್ಕಳು. ಜೀವನದಲ್ಲಿ ಯಾರನ್ನೂ ಬೇಡದವ, ಕಾಳು ಆರಿಸಿ ಉಂಡವ. ಮಗನಿಗಾಗಿ ಬೇಡಲು ಹೊರಟ.ಅದೂ ಯಾರ ಬಳಿ? ಖಾಸಾ ಗೆಳೆಯ ದ್ರುಪದನ ಹತ್ತಿರ. ಅವನು ಈಗ ರಾಜ. ಇವ ಕೇಳಿದ್ದು ಒಂದು ದನ, ಅವನು ಕೊಟ್ಟಿದ್ದು ಅವಮಾನ. ಕೊಡದಿದ್ದರೆ ಚಿಂತೆ ಇಲ್ಲ, ಅವಮಾನ ಕೊಡಬಾರದು. ಮಗನ ಮೋಹಕ್ಕೆ ತಂದೆಗೆ ಸಿಕ್ಕ ಫಲ.

ಎಲ್ಲಿಗೆ ಎಳೆದೊಯ್ದಿತು? ನಿಷ್ಠಾವಂತ ತಪಸ್ವಿ ಕ್ಷತ್ರಿಯನಾದ. ಅಂತಿಂಥ ಕ್ಷತ್ರಿಯನಲ್ಲ. ಕೌರವ ಪಾಂಡವರಿಗೆ ಬಿಲ್ವಿದ್ಯೆಯ ಗುರು. ಬ್ರಹ್ಮಾಸ್ತ್ರದ ಉಡುಗೊರೆ ಕೊಡುವಷ್ಟು ಧೀರ. ಬ್ರಾಹ್ಮಣ ಕ್ಷತ್ರಿಯನಾದದ್ದು ಮಗನ ಆಸೆಗೆ.

ಎಲ್ಲಿಗೆ ಬಂತು ಅವನ ಸ್ಥಿತಿ? ಸಹಸ್ರಾರು ಯೋಧರನ್ನು ಕೊಂದ. ಕಡೆಗೂ ಅಶ್ವತ್ಥಾಮ ಸತ್ತ ಎಂಬ ಸುದ್ದಿ ಕೇಳಿಯೇ ಸತ್ತ. ಅಲ್ಲಿಯೂ ಮಗನ ಮೋಹ. ಈ ಹಾಲುಂಡ ಮಗನಾದರೂ ಬೆಳೆದನಾ? ಎಂಥಾ ದುರವಸ್ಥೆ. ಅಪ್ಪ ಬ್ರಹ್ಮಾಸ್ತ್ರ ಕೊಡುವಾಗಲೂ ಮನಸ್ಸಿಲ್ಲದೆ ಕೊಟ್ಟ. ಸರಿಯಾಗಿ ಸಮಯಕ್ಕೆ ಉಪಯೋಗ ಆಗದಂತೆ ಹೇಳಿದ.

ಹಾಲಿನ ಅಪೇಕ್ಷೆಗೆ ಅಪ್ಪನನ್ನು ದೂಡಿದ ಮಗ. ಅಪ್ಪ ಕೊಟ್ಟ ಬ್ರಹ್ಮಾಸ್ತ್ರವನ್ನು ಹಸುಳೆಯನ್ನು ಕೊಲ್ಲಲು ಬಳಸಿದ. ಹೋಗಲಿ, ಮುಕ್ತನಾದನಾ? ಕೃಷ್ಣ ಶಾಪ ಹೊತ್ತು ನಾಯಿಯಂತೆ ಅಲೆದ. ಹಸಿದು ತಿರುಗಾಡು, ಅರಣ್ಯದಲ್ಲಿ ಹುಚ್ಚನಂತೆ ಅಲೆ. ಮೈ ಬಾಯಿ ದುರ್ಗಂಧ ಬರಲಿ. ಯಾರೂ ಸೇರದಿರಲಿ. ಅದೂ ಎಷ್ಟು ಸಮಯ. ಮೂರು ಸಾವಿರ ವರ್ಷ ಹೀಗೆ ಅಂಡಲೆ

ಇಂಥ ದುಷ್ಟ ಶಾಪ ಪಡೆದು ಅರಣ್ಯ ಸೇರಿದ. ಈಗಲೂ ಅಲೆಯುತ್ತಾನೆ. ಅಲ್ಲಿ ಇಲ್ಲಿ ಊಟಕ್ಕೆ ಬಂದು ಹೋಗುತ್ತಾನೆ. ಹುಚ್ಚನಂತೆ ಇರುತ್ತಾನೆ ಎಂಬ ಪ್ರತೀತಿ ಇದೆ. ಒಂದು ದೃಷ್ಟಿಯಿಂದ ಎಂಥಾ ತಪಸ್ವಿಯ ಕುಲ? ಯಾವ ಅಧಃಪತನವನ್ನು ಕಂಡಿತು? ಮೂಲ ಶೋಧಿಸಿದರೆ ಅದು ಅಮ್ಮ ಕೊಟ್ಟಿದ್ದನ್ನು ತಿನ್ನದ ತಪ್ಪಿನ ಫಲ. ದುರ್ಯೋಧನನ ಮನೆಯ ಹಾಲು ಮಾಡಿದ ಪರಿಣಾಮ. ಬಹಳ ದೊಡ್ಡ ಬ್ರಾಹ್ಮಣ ಕನಿಷ್ಠ ಕ್ಷತ್ರಿಯನಾದ ಕಥೆ. ಒಬ್ಬ ಕೌಶಿಕ ವಿಶ್ವಾಮಿತ್ರನಾದ ಆದರ್ಶಕ್ಕೆ ತದ್ವಿರುದ್ಧ. ಬಯಸಿದರೂ ದೊಡ್ಡದನ್ನು ಬಯಸಬೇಕು. ಬೇಡಿದರೆ ಪರಮವನ್ನು ಬೇಡಬೇಕು. ಹಾಗಾದಾಗ ಕೌಶಿಕ ವಿಶ್ವಾಮಿತ್ರನಾಗುತ್ತಾನೆ. ಕೇಡಿನ ಬೇಡುವಿಕೆಗೆ ಕೆಡುಕಿನ ಕಿಡಿ. ಅದೇ ಬೆಂಕಿಯಾಗಿ ಕುಲ ಸುಟ್ಟೀತು. ದ್ರೋಣಾಚಾರ್ಯರ ವಂಶವೇ ಸುಟ್ಟು ಭಸ್ಮ ಆಯಿತು. ಅಮ್ಮನನ್ನು ಕಾಡಿದ ಪಾಪಕ್ಕೆ. ಈಗ ದುರ್ಯೋಧನನ ಅರಮನೆ ಜಾಗದಲ್ಲಿ ಹೋಟೆಲ್ ಗಳು ಇವೆ. ಅಮ್ಮ ಮಾಡಿದ ಆಹಾರ ಬೇಡವೆನಿಸಿದೆ. ಪ್ರತೀ ಮನೆಯಲ್ಲಿ ಅಶ್ವತ್ಥಾಮರ ಕಾಟ. ತಾಯಿ ತಂದೆಯರೆಲ್ಲ ದ್ರೋಣ ಕೃಪಿಗಳೇ. ವಂಶದಿಂದ ಬಂದ ಆಹಾರ ವ್ರತ ನಿಯಮ ತೂರಿಯಾಯಿತು. ಇನ್ನೇನು ಉಳಿದದ್ದು ಕುಲನಾಶ. ಈಗ ನಾಶ ಆಗಲಿಕ್ಕೆ ಇರುವುದು ಒಂದು ದ್ರೋಣ ಕುಟುಂಬ ಅಲ್ಲ. ಮನುಕುಲವೇ ಆ ಕಡೆಗೆ ಇದೆ. ನಾಲಿಗೆ ಚಪಲಕ್ಕೆ ಇದಕ್ಕಿಂತ ದೊಡ್ಡ ಬೆಲೆ ಇನ್ನೇನು ತೆರಬೇಕು. ವಿಷಾದದ ಅನುಕಂಪ ಈ ಅಶ್ವತ್ಥಾಮ ಕುಲಕ್ಕೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248